# ಹಂಪಿ ಟೈಮ್ಸ್
HAMPI TIMES
ಕನ್ನಡ ದಿನಪತ್ರಿಕೆ
KANNADA DAILY
ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA






ಸಂಪುಟ:01 • ಸಂಚಿಕೆ:168 • ನೋಂದಣಿ ನಂ.:KARKAN27911 • ವಿಜಯನಗರ • 28.11.2023 • ಮಂಗಳವಾರ • ಪುಟ:04 • ಬೆಲೆ:2
Volume:01 • Issue:168 • Reg.No:KARKAN27911 • VIJAYANAGARA • 28.11.2023 • Tuesday • Page:04 • Rs:2





# ಪ್ರತಿ ಹುಟ್ಟು ಹಬ್ಬಕ್ಕೊಂದು ಸಸಿ ನೆಡಿ

## ನಂದಿಪುರದ ಶ್ರೀ ಚರಂತೇಶ್ವರ ಸ್ವಾಮೀಜಿ ಹೇಳಿಕೆ । ಗಣೇಶ ದೇಗುಲ ಉದ್ಘಾಟನೆ । ಶಿಲ್ಪಿಯ ನೋಟದಂತೆ ಬದುಕು ಕಾಣಿ

**ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**
ಸಮಾಜದಲ್ಲಿ ಉತ್ತಮ ಪರಿಸರ ಸೃಷ್ಟಿಸಬೇಕು, ಶಿಲ್ಪಿ ವ್ಯರ್ಥವಾಗಿದ್ದನ್ನು ತೆಗೆದು ಹಾಕಿ ಒಂದು ಸುಂದರ ಮೂರ್ತಿಯನ್ನು ರೂಪಿಸುತ್ತಾನೋ, ಹಾಗೆ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಅನಗತ್ಯವಾದವುಗಳನ್ನು ತೆಗೆದುಹಾಕಿ ಸುಂದರ ಸಮಾಜ ನಿರ್ಮಾಣಕಾರರಾಗಬೇಕು ಎಂದು ಗದ್ದಿಕೆರೆ ಮಠದ ಚರಂತೇಶ್ವರ ಸ್ವಾಮೀಜಿ ಕರೆ ನೀಡಿದರು.

ಪಟ್ಟಣದ ಬಂಡಿಹಳ್ಳಿ ರಸ್ತೆಯ ಶಿಕ್ಷಕರ ಕಾಲೂನಿಯಲ್ಲಿ ಶ್ರೀಗಣೇಶ ದೇವಸ್ಥಾನ ಸಮಿತಿ ಟ್ರಸ್ಟ್‌ನಿಂದ ಭಾನುವಾರ ಹಮ್ಮಿಕೊಂಡಿದ್ದ, ನೂತನ ಗಣೇಶ ದೇಗುಲ ಉದ್ಘಾಟನೆ ಹಾಗೂ ಶ್ರೀಗಣೇಶನ ಮೂರ್ತಿ ಪ್ರಾಣ ಪ್ರತಿಷ್ಠಾಪನೆ, ದೇಗುಲದ ಗೋಪುರ ಕಳಸಾರೋಹಣ ಮತ್ತು ಶ್ರೀಅನ್ನಪೂರ್ಣೇಶ್ವರಿ ಕೊಠಡಿ ಉದ್ಘಾಟನಾ ಸಮಾರಂಭದ ಸಾನ್ನಿಧ್ಯವಹಿಸಿ ಅವರು ಮಾತನಾಡಿದರು. ದೈವ ಭಕ್ತಿಯಲ್ಲಿರುವವರು ಯಾರು ಉಪವಾಸ ಮಾಡುವ ಅಗತ್ಯವಿಲ್ಲ, ಆರೋಗ್ಯ ಭಾಗ್ಯಕ್ಕಿಂತ ಮತ್ತೊಂದು ಭಾಗ್ಯ ಇಲ್ಲ. ಇನ್ನೂ ಆರ್ಥಿಕ ಸಂಕಷ್ಟಗಳನ್ನು ಕಂಡವರಲ್ಲಿ ಹೇಳಿಕೊಳ್ಳುವಂತಾಗಬಾರದು,



ಕಾರಣ ಸಾಲ ಮಾಡಿಕೊಂಡವನ ಬೆನ್ನಿಗೆ ಸಂಬಂಧಗಳು ನಿಲ್ಲುವುದಿಲ್ಲ. ಶಿಲ್ಪಿಯ ಕೈಯಲ್ಲಿ ಒಂದು ಶಿಲೆ ಸುಂದರ ಮೂರ್ತಿಯಂತೆ ಕಂಗೊಳಿಸುತ್ತದೆಯೋ, ಅದೇ ರೀತಿ ಎಲ್ಲಾ ಕಷ್ಟಗಳನ್ನು, ಅವಮಾನಗಳನ್ನು ಸಹಿಸಿಕೊಂಡು ಬೆಳೆದಾಗಲೇ ಮನುಷ್ಯ ಪ್ರಜ್ವಲಿಸುತ್ತಾನೆ ಎಂದ ಅವರು, ಪರಿಸರ ಉಳಿಸಲು ನಿಮ್ಮ ನಿಮ್ಮ ಮನೆಗಳಲ್ಲಿ, ಮಕ್ಕಳ ಹುಟ್ಟು ಹಬ್ಬಗಳನ್ನು ಮಾಡುವಾಗ ಈ ಸ್ಥಳಕ್ಕೆ ಬಂದು ಒಂದು ಸಸಿಗಳನ್ನು ನೆಟ್ಟುಹೋಗಿ ಎಂದು ಕರೆ ನೀಡಿದರು.

ಕಾರ್ಯಕ್ರಮದ ವೇಳೆ ಆಗಮಿಸಿದ ಶಾಸಕ ಕೆ.ನೇಮಿರಾಜ್‌ನಾಯ್ಕ್‌ರವರಿಗೆ ದೇಗುಲದ ಟ್ರಸ್ಟ್‌ನಿಂದ ದೇಗುಲದ ಕಾಂಪೌಂಡ್ ನಿರ್ಮಾಣ ಮತ್ತು ಇತರೆ ಸೌಲಭ್ಯಗಳ ಬೇಡಿಕೆಗಳನ್ನಿಟ್ಟರು. ಬೇಡಿಕೆಗೆ ಸ್ಪಂದಿಸಿದ ಶಾಸಕ ನೇಮಿರಾಜ್‌ನಾಯ್ಕ್ ದೇಗುಲದ ಅಭಿವೃದ್ಧಿಗೆ ಶ್ರಮಿಸುವುದಾಗಿ ಭರವಸೆ ನೀಡಿದರು.

ಈ ಸಮಾರಂಭದಲ್ಲಿ ಬೆಳಗಿನ ಜಾವ ಮೂರ್ತಿ ಪ್ರಾಣ ಪ್ರತಿಷ್ಠಾಪನೆ, ದೇಗುಲಕ್ಕೆ ಕಳಸ ರೋಹಣ, ಅನ್ನಪೂರ್ಣೇಶ್ವರಿ ಕೊಠಡಿ ಉದ್ಘಾಟನೆ ಸೇರಿದಂತೆ ಹೋಮ, ನವಗ್ರಹ ಪೂಜೆಗಳನ್ನು ನೆರವೇರಿಸಿದರು.

ಶಿಕ್ಷಕ ಎನ್.ಡಿ.ಕೆರೆ ಕೊಟ್ರೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ದೇಗುಲ ನಿರ್ಮಾಣ, ಮೂರ್ತಿ ಪ್ರತಿಷ್ಠಾಪನೆ, ಅಡುಗೆಕೋಣೆ ಸೇರಿದಂತೆ ಇತರೆ ಅಭಿವೃದ್ಧಿ ಕೆಲಸಗಳಿಗೆ ಮುಸ್ಲಿಂ ಸಮುದಾಯದ ಮಹಿಳಾ ಮುಖಂಡರಾದ ಭಾನಮಕ್ಕ ಮತ್ತು ಮಕ್ಕಳು ಸೇರಿದಂತೆ ಸುಮಾರು 300ಕ್ಕೂ ಹೆಚ್ಚು ಜನ ಕಾಣಿಕೆ ನೀಡಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಟ್ರಸ್ಟ್‌ನ ಅಧ್ಯಕ್ಷ ನಿವೃತ್ತ ಶಿಕ್ಷಕ ಜಿ.ಹುಲುಗಪ್ಪ, ಮುಖಂಡರಾದ ಎಚ್.ಎ.ಕೊಟ್ರೇಶ್, ನೀಲಕಂಠಪ್ಪ, ಅಂಗಡಿ ನಾಗರಾಜ್, ಗವಿಸಿದ್ದಪ್ಪ, ನಾಗಯ್ಯ ಶಾಸ್ತ್ರಿ, ಶ್ರೀಶೈಲ, ಭಾನಮ್ಮ, ಬಾಬುವಲಿ, ತಾಲೂಕು ವೈದ್ಯಾಧಿಕಾರಿ ಡಾ.ಶಿವರಾಜ್, ನಿವೃತ್ತ ಶಿಕ್ಷಕರಾದ ಯು.ಓಬಯ್ಯ, ಎಚ್.ಜಗದೀಶ, ಬ್ಯಾಟಿ ರಾಮಣ್ಣ, ಎಂ.ವೀರಣ್ಣ, ಪಿ.ಪರಮೇಶ್ವರಪ್ಪ, ಸೋಮಶೇಖರ, ನಿ. ಪೋಲೀಸ್ ಸದ್ಯೋಜಾತಯ್ಯ, ಶಿಕ್ಷಕರಾದ ಜಿ.ಎಂ.ರಮೇಶ್, ಎಂ.ಬಿಷ್ಟಪ್ಪ, ಹನುಮಬಾಯಿ, ಶಿಕ್ಷಕರಾದ ವಿಜಯಲಕ್ಷ್ಮಿ, ಅನಸೂಯಮ್ಮ, ಕೆ.ಲಕ್ಷ್ಮಿ, ಜಿ.ಎಂ.ರಮೇಶ, ಬಿ.ಮಾರುತಿ, ಎಂ.ಬಿಷ್ಟಪ್ಪ, ಸೋಮನಗೌಡ, ಹೊಸಳ್ಳಿ ಬಸಪ್ಪ, ರೆಡ್ಡಿ ಲೋಕಪ್ಪ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

## ಶ್ರೀ ಕೊಟ್ಟೂರೇಶ್ವರಗೆ ನಂದಿಧ್ವಜ ಸಮರ್ಪಣೆ



**ಹಂಪಿ ಟೈಮ್ಸ್ ಕೊಟ್ಟೂರು:** ಅಸಂಖ್ಯಾತ ಭಕ್ತರ ಆರಾಧ್ಯ ದೈವ ಪಟ್ಟಣದ ಶ್ರೀ ಕೊಟ್ಟೂರೇಶ್ವರ ಸ್ವಾಮಿಗೆ ದೇವರಮನಿ ಮಲ್ಲಿಕಾರ್ಜುನ ಅವರು ಎರಡು ನಂದಿ ಧ್ವಜಗಳನ್ನು ಸೋಮವಾರ ಅರ್ಪಿಸಿ ಭಕ್ತಿ ಸಮರ್ಪಿಸಿದರು. ಸಮಳ, ನಂದಿ ಧ್ವಜ ಕುಣಿತದ ಮೆರವಣಿಗೆ ಮೂಲಕ ಆಗಮಿಸಿ ಪೂಜೆ ಸಲ್ಲಿಸಿ ಶ್ರೀಮಠಕ್ಕೆ ನಂದಿ ಧ್ವಜ ಅರ್ಪಿಸಿದರು. ಕುಟುಂಬದ ಸದಸ್ಯರು ಇದ್ದರು.

## ನ್ಯಾಯಾಲಯದಲ್ಲಿ ಭಾರತ ಸಂವಿಧಾನ ಪ್ರಸ್ತಾವನೆ ಭೋಧನೆ



**ಹಂಪಿ ಟೈಮ್ಸ್ ಹೊಸಪೇಟೆ**
ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬಳ್ಳಾರಿ, ತಾಲೂಕು ಕಾನೂನು ಸೇವಾ ಸಮಿತಿ ಹಾಗೂ ವಕೀಲರ ಸಂಘ ಹೊಸಪೇಟೆ ಇವರ ಆಶ್ರಯದಲ್ಲಿ ಭಾರತ ಸಂವಿಧಾನ ದಿನವನ್ನು ನಗರದ ನ್ಯಾಯಾಲಯದ ಆವರಣದಲ್ಲಿ ಸೋಮವಾರ ಆಚರಿಸಲಾಯಿತು.

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಅಬ್ದುಲ್ ರಹೀಮಾನ್ ಎ.ನಂದಗಡಿ ಸಂವಿಧಾನದ ಪ್ರಸ್ತಾವನೆಯ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷರಾದ ಹೇಮಲತಾ ಬಿ.ಹುಲ್ಲೂರ, ಹಿರಿಯ ಸಿವಿಲ್ ನ್ಯಾಯಾಧೀಶರಾದ ರಮೇಶಬಾಬು ಬಿ.ಎನ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ತಾಲೂಕು ಕಾನೂನು ಸೇವಾ ಸಮಿತಿ ಸದಸ್ಯ ಕಾರ್ಯದರ್ಶಿ ಕಿಶನ್ ಬಿ.ಮಾಡಲಗಿ, ಅಪರ ಸಿವಿಲ್ ಮತ್ತು ಜೆಎಂಎಫ್ ಸಿ ನ್ಯಾಯಾಧೀಶರಾದ ತೃಪ್ತಿ ಧರಣಿ, 3ನೇ ಅಪರ ಸಿವಿಲ್ ಮತ್ತು ಜೆಎಂಎಫ್ ಸಿ ನ್ಯಾಯಾಧೀಶರಾದ ಚೈತ್ರ ಜೆ, ಸರಕಾರಿ ಅಭಿಯೋಜಕ ಟಿ.ಅಂಬಣ್ಣ, ವಕೀಲರ ಸಂಘದ ಅಧ್ಯಕ್ಷ ಕೆ.ವಿ.ಬಸವರಾಜ, ಕಾರ್ಯದರ್ಶಿ ಎ.ಕರುಣಾನಿಧಿ, ತಾಲೂಕು ಕಾನೂನು ಸೇವಾ ಸಮಿತಿಯ ಆಡಳಿತ ಅಧಿಕಾರಿ ಎಸ್.ಬಿ.ಕಮತಗಿ ಸೇರಿದಂತೆ ನ್ಯಾಯಾಲಯದ ಸಿಬ್ಬಂದಿ, ವಕೀಲರು, ಕಕ್ಷಿದಾರರು ಉಪಸ್ಥಿತರಿದ್ದರು.

### ಮೈಕ್ರೋ ನ್ಯೂಸ್


PLACE YOUR AD
HOUSE RENT / SALE / LEASE, CHANGE OF NAME,
Notice Advertisement. & EVENT COVERAGE
Contact
9448633038
Near Valmiki Circle,
HOSAPETE-583201
Email:hampitimes@gmail.com


ಮೈಮೇಲೆ ಹರಿದ ಬಟ್ಟೆ ಇದ್ದರೂ ಚಿಂತೆಯಿಲ್ಲ. ಕೈಯಲ್ಲೊಂದು ಕನ್ನಡ ಪತ್ರಿಕೆ ಇರಲಿ.
ಡಿ..ವಿ.ಜಿ.



**ಹಂಪಿ ಟೈಮ್ಸ್ ರಾಯಚೂರು:** ಚುನಾವಣಾ ಪ್ರಚಾರ ನಿಮಿತ್ಯ ನೆರೆಯ ತೆಲಂಗಾಣಕ್ಕೆ ಆಗಮಿಸಿದ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಅವರನ್ನು ಕಾಂಗ್ರೆಸ್ ಯುವ ಮುಖಂಡ ರವಿ ಭೋಸರಾಜು ಸ್ವಾಗತಿಸಿದರು. ಗಡಿ ಜಿಲ್ಲಾ ಕೇಂದ್ರವಾದ ಗದ್ವಾಲ್ ನಗರದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಚುನಾವಣಾ ಪ್ರಚಾರ ಸಭೆಯಲ್ಲಿ ಭಾಗವಹಿಸಿ ಕಾರ್ಯಕರ್ತರಲ್ಲಿ ಉತ್ಸಾಹ ತುಂಬಿದರು.

# ಕನ್ನಡ ಉಳಿಸಿ ಅಂತ ಅನ್ನುವವರು ಮಕ್ಕಳನ್ನ ಆಂಗ್ಲ ಶಾಲೆಗೆ ಕಳಿಸ್ತಾರೆ

## ಕರ್ನಾಟಕ ಸಂಭ್ರಮ 50ರ ಕನ್ನಡ ಹಬ್ಬದಲ್ಲಿ ಜಗದ್ಗುರು ಶ್ರೀ ಕೊಟ್ಟೂರು ಬಸವಲಿಂಗ ಮಹಾಸ್ವಾಮಿಗಳು ಹೇಳಿಕೆ



**ಹಂಪಿ ಟೈಮ್ಸ್ ಹೊಸಪೇಟೆ**
ಕನ್ನಡ ಉಳಿಯಬೇಕಾದರೆ ಎಲ್ಲರೂ ಕನ್ನಡ ಮಾತನಾಡಬೇಕು. ಮೇಧಾವಿಗಳು ಕನ್ನಡ ಭಾಷಣ ಮಾಡಿ, ತಮ್ಮ ಮಕ್ಕಳನ್ನು ಇಂಗ್ಲಿಷ್ ಶಾಲೆಗೆ ಹಾಕಿದರೆ ಹೇಗೆ? ಅವರು ಸಹ ಕನ್ನಡ ಮಾಧ್ಯಮದಲ್ಲಿ ಓದಿಸದಾಗ ಕನ್ನಡ ಉಳಿಸಲು ಸಾಧ್ಯ ಎಂದು ಕೊಟ್ಟೂರು ಸಂಸ್ಥಾನಮಠದ ಜಗದ್ಗುರು ಶ್ರೀ ಬಸವಲಿಂಗ ಸ್ವಾಮೀಜಿ ಹೇಳಿದರು.

ನಗರದ ಶ್ರೀ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಕನ್ನಡ ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಸೋಮವಾರ ಮಾತನಾಡಿದರು. ಕನ್ನಡ ಮಾಧ್ಯಮದಲ್ಲಿ ಓದಿದವರೇ ಇಂದು ದೊಡ್ಡ ದೊಡ್ಡ ಹುದ್ದೆಯಲ್ಲಿದ್ದಾರೆ ಎಂಬುದನ್ನು ಮರೆಯಬಾರದು. ಪ್ರಾರಂಭದಲ್ಲೇ ಕನ್ನಡ ಶಾಲೆಗಳು ಸುಧಾರಿಸಿದರೆ ಕನ್ನಡ ಉಳಿಯುತ್ತದೆ. ಕನ್ನಡ ಉಳಿಸಬೇಕೆಂಬ ದೃಷ್ಟಿಯಿಂದ ಕೊಟ್ಟೂರುಸ್ವಾಮಿ ಮಠದಿಂದ ಆಂಧ್ರದ ಆಧೋನಿಯಲ್ಲಿ ಗಡಿನಾಡ ಕನ್ನಡ ಶಾಲೆಗಳನ್ನು ತೆರೆದು, ಉಚಿತ ಶಿಕ್ಷಣ, ವಸತಿಯನ್ನು ನೀಡಿ ನಡೆಸಲಾಗುತ್ತಿದೆ. ಕನ್ನಡ ಉಳಿಸಿ ಬೆಳೆಸುವ ನಿಟ್ಟಿನಲ್ಲಿ ನಿರಂತರ ಶ್ರಮಿಸಬೇಕು. ನವೆಂಬರ್ ತಿಂಗಳಿಗೆ ಕನ್ನಡ ಕಾಳಜಿ ಸೀಮಿತವಾಗದಿರಲಿ ಎಂದರು.

ಸುವರ್ಣ ಕರ್ನಾಟಕ ಸಂಭ್ರಮ 50 ರ ಆಚರಣಾ ಸಮಿತಿಯಿಂದ ಸೋಮವಾರ ಐತಿಹಾಸಿಕ ಕನ್ನಡ ಹಬ್ಬ ಅತ್ಯಂತ ಸಡಗರ ಸಂಭ್ರಮದಿಂದ ಅದ್ದೂರಿಯಾಗಿ ನಡೆಯಿತು. ಮೆರವಣಿಗೆಗೆ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಚಾಲನೆ ನೀಡಿದರು.

ಪ್ರಾಧ್ಯಾಪಕ ಬಸವರಾಜ ಕಿನ್ನಾಳ ಮಾತನಾಡಿ, ಕನ್ನಡ ಉಳಿಯಬೇಕಾದರೆ ಮೊದಲು ತಳ ಸಮುದಾಯಗಳಿಗೆ ಕನ್ನಡಪರ ಸಂಘಟನೆಯವರು ಶಿಕ್ಷಣ, ಆರೋಗ್ಯ, ಉದ್ಯೋಗ ಸೇರಿ ಮುಂತಾದ ಸರ್ಕಾರದ ಎಲ್ಲಾ ಸೌಲಭ್ಯಗಳನ್ನು ಕೊಡಿಸುವ ಕೆಲಸ ಮಾಡಿದರೆ ಕನ್ನಡ ಉಳಿಯಲು ಸಾಧ್ಯವಿದೆ ಎಂದರು. ಅಂಜುಮನ್ ಕಮಿಟಿ ಅಧ್ಯಕ್ಷ ಇಮಾಮ್ ನಿಯಾಜಿ, ಉಪನ್ಯಾಸಕ ಬಸವರಾಜ ಮಾತನಾಡಿದರು. ನಗರಸಭೆ ಅಧ್ಯಕ್ಷೆ ಎ.ಲತಾ ಅಧ್ಯಕ್ಷತೆ ವಹಿಸಿದ್ದರು. ಬಳಿಕ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ, ಹಾಗು ಎಲ್ಲಾ ಸಂಘಟನೆಗಳ ಐದು ಪ್ರಮುಖರಿಗೆ ಸನ್ಮಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಎಚ್.ಜಿ.ಗುರುದತ್, ವಕ್ಫ್ ಬೋರ್ಡ್ ಅಧ್ಯಕ್ಷ ದಾದಾಪೀರ್, ನಗರಸಭೆ ಉಪಾಧ್ಯಕ್ಷ ರೂಪೇಶಕುಮಾರ್, ಸದಸ್ಯರಾದ ಎಲ್.ಎಸ್.ಆನಂದ ಸೇರಿದಂತೆ ಇತರರಿದ್ದರು.

## ಮಹಿಳಾ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗೆ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ**
ವಿಜಯನಗರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ 2023-24ನೇ ಸಾಲಿಗೆ ನಿಗಮದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಉದ್ಯೋಗಿನಿ ಯೋಜನೆ, ಚೇತನ ಯೋಜನೆ, ಧನಶ್ರೀ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆಗಳಡಿ ಅರ್ಹ ಫಲಾನುಭವಿಗಳಿಗೆ ಸಹಾಯಧನ ಸೌಲಭ್ಯ ಕಲ್ಪಿಸಲಾಗಿದೆ.

ಅರ್ಜಿ ಸಲ್ಲಿಸಲು 18 ರಿಂದ 55 ವರ್ಷ ವಯೋಮಿತಿಯಲ್ಲಿರಬೇಕು. ಅರ್ಜಿದಾರರು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಮಾಡಿಸಿರಬೇಕು. ಆಸಕ್ತ ಫಲಾಪೇಕ್ಷಿಗಳು ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸುವುದು. ಸೇವಾ ಸಿಂಧು ಪೋರ್ಟಲ್ https://sevasindhu.karnataka.gov.in ನಲ್ಲಿ ಅರ್ಜಿ ಸಲ್ಲಿಸಬೇಕು. ಸರ್ಕಾರದ ವಿವೇಚನಾ ಕೋಟಾ ಮತ್ತು ನಿಗಮದ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯಲು ಇಚ್ಛಿಸುವ ಫಲಾಪೇಕ್ಷಿಗಳು, ಅರ್ಜಿದಾರರು ಸಚಿವರು, ಶಾಸಕರು, ಕರ್ನಾಟಕ ಸರ್ಕಾರ, ಅಧ್ಯಕ್ಷರು, >> 3



# ಸಂವಿಧಾನ ಪೂಜ್ಯನೀಯ ಗ್ರಂಥ

## ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಚಂದ್ರಶೇಖರ ಸಿ. ಹೇಳಿಕೆ । ಸಂವಿಧಾನ ದಿನಾಚರಣೆಯಂದು ಪ್ರಸ್ತಾವನೆ ಬೋಧನೆ

**ಹಂಪಿ ಟೈಮ್ಸ್ ಕೊಪ್ಪಳ**

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕೊಪ್ಪಳ ಜಿಲ್ಲಾ ವಕೀಲರ ಸಂಘ ಹಾಗೂ ದಕ್ಷಿಣ ಭಾರತ ಹಿಂದಿ ಪ್ರಚಾರ ಸಭೆಯ ಭಾರತ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾವಿದ್ಯಾಲಯ ಕೊಪ್ಪಳ ಇವರ ಸಹಯೋಗದಲ್ಲಿ ನವೆಂಬರ್ 26ರಂದು ಸಂವಿಧಾನ ದಿನಾಚರಣೆ ಕಾರ್ಯಕ್ರಮ ನಡೆಯಿತು.

ನಗರದ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾವಿದ್ಯಾಲಯದಲ್ಲಿ ನಡೆದ ಕಾರ್ಯಕ್ರಮವನ್ನು ಗೌರವಾನ್ವಿತ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಚಂದ್ರಶೇಖರ ಸಿ ಅವರು ದೀಪ ಬೆಳಗಿಸಿ ಉದ್ಘಾಟಿಸಿದರು. ಇದೆ ವೇಳೆ ಅವರು ಭಾರತದ ಸಂವಿಧಾನದ ಪ್ರಸ್ತಾವನೆಯನ್ನು ಬೋಧಿಸಿದರು.




ಈ ವೇಳೆ ಮಾತನಾಡಿದ ಅವರು, ಸರ್ವರಿಗು ಸಮಬಾಳು ಸರ್ವರಿಗೂ ಸಮಪಾಲು ಎನ್ನುವ ಆಶಯದ ಸಂವಿಧಾನ ನಮಗೆಲ್ಲರಿಗೂ ಪೂಜ್ಯನೀಯ ಮಹಾನ್ ಗ್ರಂಥವಾಗಿದೆ. ಸಮಾನತೆ, ಸೌಹಾರ್ದತೆ ಸಾಧಿಸುವಲ್ಲಿ ಸಂವಿಧಾನವು ನಮಗೆ ದಾರಿದೀಪವಾಗಿದೆ. ಜಾಗತಿಕವಾಗಿ ಹೆಸರಾದ ಮತ್ತು ಅನೇಕ ದೇಶಗಳಿಗೆ ಮಾದರಿಯಾದ ಸಂವಿಧಾನವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ ಮಹನೀಯರಾದ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಸದಾಕಾಲ ಸ್ಮರಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಶ್ರೀ ಗವಿಸಿದ್ದೇಶ್ವರ ಪದವಿ ಕಾಲೇಜಿನ ರಾಜ್ಯಶಾಸ್ತ್ರ ಉಪನ್ಯಾಸಕರಾದ ಮಂಜುನಾಥ ಹಿರೇಮಠ ಅವರು ವಿಶೇಷ ಉಪನ್ಯಾಸ ನೀಡಿದರು.

ದಕ್ಷಿಣ ಭಾರತ ಹಿಂದಿ ಪ್ರಚಾರ ಸಭಾ ಕರ್ನಾಟಕದ ಅಧ್ಯಕ್ಷರಾದ ಈರೇಶ್ ಅಂಚಟಗೇರಿ ಅವರು ಅಧ್ಯಕ್ಷತೆ ವಹಿಸಿದ್ದರು.

ಸಮಾರಂಭದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎ.ವಿ.ಕಣವಿ, ರಾಜ್ಯ ವಕೀಲರ ಪರಿಷತ್ತಿನ ಸದಸ್ಯರಾದ ಆಸಿಫ್ ಅಲಿ, ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದೇವೇಂದ್ರ ಪಂಡಿತ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಮುಖ್ಯ ನ್ಯಾಯಿಕ ದಂಡಾಧಿಕಾರಿಗಳಾದ ಭವಾನಿ ಎಲ್. ಜೆ., ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳಾದ ಹರೀಶಕುಮಾರ ಹಾಗೂ ಕಾಲೇಜಿನ ಪ್ರಾಂಶುಪಾಲರಾದ ಹಿರೇಮಠ ಅವರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ವಕೀಲರು, ಕಾನೂನು ವಿದ್ಯಾರ್ಥಿಗಳು, ಮತ್ತಿತರರು ಇದ್ದರು. ನಿಂಗಪ್ಪ ಮತ್ತು ಪೂಜಾ ನಿರೂಪಿಸಿದರು.

# ಜ್ಯೋತಿ ರಥಯಾತ್ರೆ ಅದ್ದೂರಿ ಸ್ವಾಗತ



**ಹಂಪಿ ಟೈಮ್ಸ್ ಕೊಪ್ಪಳ**

ಕರ್ನಾಟಕ ಸಂಭ್ರಮ 50ರ ಜ್ಯೋತಿ ರಥಯಾತ್ರೆಯು ಪೂರ್ವ ನಿಗದಿಯಂತೆ ನವೆಂಬರ್ 26ರಂದು ಕೊಪ್ಪಳ ತಾಲೂಕಿಗೆ ಪ್ರವೇಶ ಮಾಡಿತು.

ಬೆಳಗ್ಗೆ ಗಂಗಾವತಿಯಿಂದ ಹೊರಟು ಬೂದಗುಂಪಾ ಮಾರ್ಗವಾಗಿ ಕೊಪ್ಪಳ ತಾಲೂಕಿಗೆ ಪ್ರವೇಶ ಮಾಡುವ ಸಂದರ್ಭದಲ್ಲಿ ಮಾರ್ಗ ಮಧ್ಯದ ಜಬ್ಬಲಗುಡ್ಡ ಗ್ರಾಮದಲ್ಲಿ ಬಳಿಯಲ್ಲಿ ಅದ್ದೂರಿಯಾಗಿ ಸ್ವಾಗತ ಕೋರಲಾಯಿತು.

ಜಬ್ಬಲಗುಡ್ಡ ಸೇರಿದಂತೆ ಸುತ್ತಲಿನ ವಿವಿಧ ಗ್ರಾಮಗಳ ಮಹಿಳೆಯರು ರಥದ ಮುಂದೆ ಕುಂಭ ಹೊತ್ತು ಸಾಲಾಗಿ ಸಾಗಿ ಗಮನ ಸೆಳೆದರು. ಕನ್ನಡಪರ ಸಂಘಟನೆಗಳು ಸೇರಿದಂತೆ ವಿವಿಧ ಸಂಘಟನೆಗಳು ಮುಖಂಡರು ಕನ್ನಡ ಧ್ವಜದ ಶಾಲುಗಳನ್ನು ಹಾಕಿ ಸಾಲಾಗಿ ಹೆಜ್ಜೆ ಹಾಕಿ ಕಾರ್ಯಕ್ರಮಕ್ಕೆ ಮೆರುಗು ತಂದರು.

ಈ ಸಂದರ್ಭದಲ್ಲಿ ತಹಸೀಲ್ದಾರ ವಿಠ್ಠಲ್ ಚೌಗಲಾ, ತಾಪಂ ಕಾರ್ಯನಿರ್ವಹಣಾಧಿಕಾರಿ ದುಂಡಪ್ಪ ತುರಾದಿ, ಗ್ರೇಡ್ 2 ತಹಸೀಲ್ದಾರ ಗವಿಸಿದ್ದಪ್ಪ ಮಣ್ಣೂರ, ಗ್ರಾಪಂ ಅಭಿವೃದ್ಧಿ ಅಧಿಕಾರಿ ಲಕ್ಷ್ಮಿ, ಕೊಪ್ಪಳ ತಹಸೀಲ್ದಾರ ಕಚೇರಿಯ ಶಿರಸ್ತೇದಾರ ಮಹಾವೀರಕುಮಾರ ಅಳ್ಳಳ್ಳಿ, ಬಿಸಿಎಂ ಇಲಾಖೆಯ ಅಧಿಕಾರಿ ನಾಗರತ್ನ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿ ವಿಲಾಸ ಸೇರಿದಂತೆ ಕೊಪ್ಪಳ ತಾಲೂಕಿನ ತಾಲೂಕುಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

ನವೆಂಬರ್ 28, 29ರಂದು ಕೂಕನೂರಲ್ಲಿ ಸಂಚಾರ: ಕೊಪ್ಪಳ ತಾಲೂಕಿನಲ್ಲಿ ಸಂಚರಿಸಿದ ಬಳಿಕ ಜ್ಯೋತಿ ರಥಯಾತ್ರೆಯು ಪೂರ್ವನಿಗದಿಯಂತೆ ನವೆಂಬರ್ 28 ಮತ್ತು ನವೆಂಬರ್ 29ರಂದು ಎರಡು ದಿನಗಳ ಕಾಲ ಕುಕನೂರ ತಾಲೂಕಿನಾದ್ಯಂತ ಸಂಚರಿಸಲಿದೆ.

ಜಿಲ್ಲಾಧಿಕಾರಿಗಳ ಸೂಚನೆ: ಕುಕನೂರ ತಾಲ್ಲೂಕಿನಲ್ಲಿ ಕನ್ನಡ ಜ್ಯೋತಿ ಯಾತ್ರೆ ರಥವು ಎರಡು ದಿನಗಳ ಕಾಲ ಇರುವುದರಿಂದ ಸಂಬಂಧಿಸಿದ ತಾಲ್ಲೂಕಿನ ತಹಶೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು ರಥಯಾತ್ರೆಯು ಸಂಚರಿಸುವ ಮಾರ್ಗವನ್ನು 2 ದಿನಕ್ಕೆ ನಿಗದಿಪಡಿಸಬೇಕು. ರಥವು ಸಂಚರಿಸುವ ಮಾರ್ಗದಲ್ಲಿ ಬರುವ ಪಟ್ಟಣ ಹಳ್ಳಿಗಳಲ್ಲಿ ಸ್ವಾಗತ, ಪೂಜೆ, ಪುಷ್ಪಾರ್ಚನೆ ಮೆರವಣಿಗೆ ಮಾಡಿಸಬೇಕು. ಅಧಿಕಾರಿಗಳು ಸಿಬ್ಬಂದಿಗಳು, ಸಾರ್ವಜನಿಕರು, ಪ್ರೌಢಶಾಲೆ ಕಾಲೇಜು ವಿದ್ಯಾರ್ಥಿಗಳಿಂದ ಅದ್ದೂರಿ ಸ್ವಾಗತ, ಪೂಜೆ, ಪುಷ್ಪಾರ್ಚನೆ ಮತ್ತು ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಿಸುವ ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಕುಕನೂರ ತಾಲೂಕಿನ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದ್ದಾರೆ.

ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ: ಕರ್ನಾಟಕ ಸಂಭ್ರಮ-50ರ ಜ್ಯೋತಿ ರಥವು ನಂತರ ಯಲಬುರ್ಗಾ ತಾಲೂಕು, ಕುಷ್ಟಗಿ ತಾಲೂಕು, ಕನಕಗಿರಿ ತಾಲೂಕು ಹಾಗೂ ಕಾರಟಗಿ ತಾಲೂಕುಗಳಲ್ಲಿ ಸಹ ಸಂಚರಿಸಲಿದ್ದು, ತಾಲೂಕುಮಟ್ಟದ ಅಧಿಕಾರಿಗಳು ಈಗಿನಿಂದಲೇ ಪೂರ್ವಸಿದ್ಧತೆ ಮಾಡಿಕೊಳ್ಳಬೇಕು. ಜ್ಯೋತಿ ರಥಯಾತ್ರೆಯು ತಾಲೂಕಿಗೆ ಆಗಮಿಸುವ ಮಾಹಿತಿಯನ್ನು ಆಯಾ ತಾಲ್ಲೂಕಿನ ಜನಪ್ರತಿನಿಧಿಗಳಿಗೆ ಮತ್ತು ಸಾಹಿತಿಗಳು ಕಲಾವಿದರು, ಕನ್ನಡಪರ ಸಂಘಟನೆಗಳು, ಮಾಧ್ಯಮದವರಿಗೆ ತಿಳಿಸಬೇಕು. ಕಾರ್ಯಕ್ರಮಕ್ಕೆ ಆಯಾ ತಾಲೂಕಿನಲ್ಲಿ ತಹಶೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಮನ್ವಯದಲ್ಲಿ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಬೇಕು. ಆಯಾ ತಾಲ್ಲೂಕಿನ ಗಡಿ ಭಾಗದವರೆಗೆ ಮಾರ್ಗ ಮಧ್ಯದಲ್ಲಿ ಬರುವ ಎಲ್ಲಾ ಹೋಬಳಿ ಹಾಗೂ ಗ್ರಾ.ಪಂಗಳಲ್ಲಿ ಗೌರವಯುತವಾಗಿ ಬರಮಾಡಿಕೊಳ್ಳುವ ವ್ಯವಸ್ಥೆ ಮಾಡಬೇಕು. ಆಯಾ ತಾಲ್ಲೂಕಿನ ಗಡಿಭಾಗದ ಮುಕ್ತಾಯದವರೆಗೂ ಸಂಚರಿಸಿ ಮುಂದಿನ ತಾಲೂಕಿಗೆ ಬೀಳ್ಕೊಡುವ ಶಿಷ್ಟಾಚಾರ ಪಾಲನೆ ಮಾಡಬೇಕು ಎಂದು ಆಯಾ ತಾಲೂಕಿನ ತಹಶೀಲ್ದಾರರು, ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಪುರಸಭೆ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

# ಪ್ರೌಢಶಾಲೆಗಳಲ್ಲಿ ಮಕ್ಕಳಿಂದ ಸಂವಿಧಾನ ದಿನಾಚರಣೆ



**ಹಂಪಿ ಟೈಮ್ಸ್ ರಾಯಚೂರು**

ಸಂವಿಧಾನದ ಸಮರ್ಪಣಾ ದಿನಾಚರಣೆ ಹಿನ್ನೆಲೆಯಲ್ಲಿ ರಾಯಚೂರು ತಾಲೂಕಿನ ಉಡಮಗಲ್ ಖಾನಾಪುರದ ಸರ್ಕಾರಿ ಪ್ರೌಢಶಾಲೆ ಯಲ್ಲಿ ದಿನಾಂಕ 26 /11 /2023 ರಂದು ಸಂವಿಧಾನ ಸಮರ್ಪಣಾ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಯಿತು .ಶಾಲಾ ಮುಖ್ಯ ಗುರುಗಳು . ಶಿಕ್ಷಕ ವೃಂದ .ಮತ್ತು ವಿದ್ಯಾರ್ಥಿಗಳು ಡಾ. ಬಿ ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪುಷ್ಪಾರ್ಚನೆಯನ್ನು ಮಾಡಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರದರ್ಶಿಯಾದ ಡಾ. ದಂಡಪ್ಪ ಬಿರಾದಾರ್ ಮಾತನಾಡುತ್ತಾ ಭವ್ಯ ಭಾರತವು 1947ರ ರಲ್ಲಿ ಸ್ವಾತಂತ್ರ್ಯಗೊಂಡಿತು. ಸ್ವತಂತ್ರಗೊಂಡ ಭವ್ಯ ಭಾರತಕ್ಕೆ ಅರ್ಥಪೂರ್ಣವಾದ ಸಂವಿಧಾನ ಅವಶ್ಯಕತೆ ಇತ್ತು. ಭಾರತ ದೇಶದ ಪ್ರಥಮ ರಾಷ್ಟ್ರಪತಿ ಡಾ. ರಾಜೇಂದ್ರ ಪ್ರಸಾದವರ ಅಧ್ಯಕ್ಷತೆಯಲ್ಲಿ ಸಂವಿಧಾನ ರಚನಾ ಸಮಿತಿ ಮಾಡಲಾಯಿತು. ನಂತರ ಭಾರತ ರತ್ನ ಸಂವಿಧಾನ ಶಿಲ್ಪಿ ಎಂದು ಕರೆಯಲ್ಪಡುವ ಡಾ. ಬಿ ಆರ್ ಅಂಬೇಡ್ಕರ್ ಅವರನ್ನು ಕರಡು ಸಮಿತಿಯ ಅಧ್ಯಕ್ಷರನ್ನಾಗಿ ಮಾಡಿದರು. ಭಾರತ ಸಂವಿಧಾನದಲ್ಲಿರುವ ಹಲವಾರು ಅಂಶಗಳು ಬೇರೆ ಬೇರೆ ದೇಶಗಳ ಸಂವಿಧಾನದಿಂದ ಪ್ರಮುಖ ಅಂಶಗಳನ್ನು ಆಯ್ದುಕೊಂಡು ನಂತರ ಈ ವಿಷಯ ಕುರಿತು ಸಂವಿಧಾನ ರಚನಾ ಸಮಿತಿ ಸದಸ್ಯರು ಹಲವಾರು ಸಭೆಗಳನ್ನು ಮಾಡಿ ನಂತರ ಭಾರತ ದೇಶದ ಪ್ರಥಮ ಪ್ರಧಾನ ಮಂತ್ರಿಯಾದ ಪಂಡಿತ್ ಜವಾಹರಲಾಲ್ ನೆಹರು ಅವರ ಮಂತ್ರಿಮಂಡಲಕೆ ದಿನಾಂಕ 1949 ನವೆಂಬರ್ 26ರಂದು ಡಾ. ಬಿಆರ್ ಅಂಬೇಡ್ಕರ್ ಸಂವಿಧಾನವನ್ನು ಸಮರ್ಪಣೆ ಮಾಡಿದರು. ಕಾನೂನಿನ ನಿಘಂಟು ಆಗಿರುವ ಈ ಸಂವಿಧಾನ ಅಡಿಯಲ್ಲಿ ಪ್ರತಿಯೊಬ್ಬರು ಕಾರ್ಯನಿರ್ವಹಿಸಿ ಎಂದು ಡಾ.ಬಿರಾದಾರ .ವರು ಹೇಳಿದರು .ನಂತರ ಸಂವಿಧಾನ ಸಮರ್ಪಣಾ ದಿನಾಚರಣೆ ಹಿನ್ನೆಲೆಯಲ್ಲಿ ವಿವಿಧ ಸ್ಪರ್ಧೆಗಳನ್ನು ಆಯೋಜನೆ ಮಾಡಲಾಗಿತ್ತು. ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಸಂವಿಧಾನ ಪೀಠಿಕೆಯ ಪ್ರಸ್ತಾವನೆಯನ್ನು ಸಾಮೂಹಿಕವಾಗಿ ಓದುವ ಕಾರ್ಯ ಮಾಡಲಾಯಿತು ಮುಖ್ಯ ಗುರುಗಳಾದ ವೀರೇಶ್ ಅಂಗಡಿ ರವರು ಕಾರ್ಯಕ್ರಮದ ಹಿನ್ನೆಲೆ ಕುರಿತು ಮಾತನಾಡಿದರು. ಶಾಲೆಯ ವೃತ್ತಿಪರ ಶಿಕ್ಷಕರ ಪಾಂಡುರಂಗ ದೇಸಾ ಯಿರವರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜನೆ ಮಾಡಿದರು .ಈ ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಕಿಯರಾದ ಶ್ರೀಮತಿ ನಫೀಜಾ ಅಂಜುಮ ಶ್ರೀಮತಿ ಅನಿತಾ ಕುಲಕರ್ಣಿ .ಶ್ರೀಮತಿ ಶಿವಲೀಲಾ .ಶ್ರೀಮತಿ ಶಶಿಕಲಾ

# ವಿಜೃಂಭಣೆಯಿಂದ ನಡೆದ ಜನಪರ ಉತ್ಸವ

## "ಜನಪರ ಉತ್ಸವ" ಸಾಂಸ್ಕೃತಿಕ ಕಾರ್ಯಕ್ರಮಗಳು ಅದ್ದೂರಿ । ಶಾಸಕ ಕಂಪ್ಲಿ ಗಣೇಶ್ ಉದ್ಘಾಟಿಸಿದರು

**ಹಂಪಿ ಟೈಮ್ಸ್ ಬಳ್ಳಾರಿ**

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕುರುಗೋಡು ತಾಲ್ಲೂಕು ಆಡಳಿತ ಹಾಗೂ ಪುರಸಭೆ ಇವರ ಸಂಯುಕ್ತಾಶ್ರಯದಲ್ಲಿ ಕುರುಗೋಡು ಪಟ್ಟಣದ ಶ್ರೀ ದೊಡ್ಡಬಸವೇಶ್ವರ ದೇವಸ್ಥಾನ ಮುಂಭಾಗ ಆವರಣದಲ್ಲಿ ಶನಿವಾರ ಸಂಜೆ ಆಯೋಜಿಸಿದ್ದ "ಜನಪರ ಉತ್ಸವ" ಸಾಂಸ್ಕೃತಿಕ ಕಾರ್ಯಕ್ರಮಗಳು ಅದ್ದೂರಿಯಾಗಿ ನಡೆದವು.

ಕಂಪ್ಲಿ ಶಾಸಕ ಜೆ.ಎನ್.ಗಣೇಶ್ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಿದರು.

ಬಳಿಕ ಮಾತನಾಡಿದ ಅವರು, ಅನಾದಿ ಕಾಲದಿಂದ ಕಲೆ, ಸಂಸ್ಕೃತಿ, ಸಂಭ್ರಮವನ್ನು ಬಿಂಬಿಸುವ ಜನಪದ ಕಲೆಗಳು, ಸರ್ವಕಾಲಕ್ಕೂ ಮನರಂಜನೆಯನ್ನು ನೀಡುವುದರ ಜೊತೆಗೆ ನಮ್ಮ ಭವ್ಯ ಪರಂಪರೆಯನ್ನು ಉಳಿಸಿಕೊಂಡು ಬಂದಿವೆ ಎಂದು ಹೇಳಿದರು.

ಇಂದಿನ ವಿದ್ಯಾರ್ಥಿಗಳು ವಿದ್ಯಾರ್ಜನೆಯ ಜೊತೆಗೆ ಇಂತಹ ಕಲೆಗಳನ್ನು ಕಲಿತು, ಅದರಲ್ಲಿ ತಮ್ಮನ್ನು ತೊಡಗಿಸಿಕೊಂಡು ಮುಂದಿನ ಪೀಳಿಗೆಗೂ ತಲುಪಿಸುವ ಕೆಲಸ ಮಾಡಬೇಕು. ಸಾಂಸ್ಕೃತಿಕ ಕಲೆಗಳ ಮೇಲಿರುವ ಆಸಕ್ತಿಯಿಂದ ಶೈಕ್ಷಣಿಕವಾಗಿ ಹೆಚ್ಚಿನ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಲೆಯಲ್ಲಿ ತೊಡಗಿಸಿಕೊಂಡವರು, ಉಳಿದವರಿಗಿಂತ ತಮ್ಮ ವ್ಯಕ್ತಿತ್ವದಲ್ಲಿ ಭಿನ್ನವಾಗಿರುತ್ತಾರೆ. ಅಂತವರು ಸಜ್ಜನಿಕೆ, ಸೌಮ್ಯತೆ, ಸಾಮಾಜಿಕ ಕಾಳಜಿ ಉಳ್ಳವರಾಗಿರುತ್ತಾರೆ ಎಂದರು.

ಇಂದಿನ ವಿದ್ಯಾರ್ಥಿಗಳಿಗೆ ಇಂತಹ ಕಲೆಗಳ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಪ್ರೋತ್ಸಾಹ ನೀಡಬೇಕು. ಆ ಮೂಲಕ ಮಕ್ಕಳಲ್ಲಿ ಕೌಶಲ್ಯ, ಜ್ಞಾನ, ಮೌಲ್ಯ ವೃದ್ಧಿಸಲು ಸಾಧ್ಯವಾಗುತ್ತದೆ. ಸಂಸ್ಕೃತಿ, ಸಾಂಸ್ಕೃತಿಕ ಕಲೆಯ ಪರಿಚಯದಿಂದ ವ್ಯಕ್ತಿತ್ವದಲ್ಲಿ ಬದಲಾವಣೆ ತರಲು ಸಾಧ್ಯ. ನಾಟಕ, ಯಕ್ಷಗಾನ, ಮುಂತಾದ ಕಲೆಗಳನ್ನು ಕಿರಿಯರಿಗೆ ಪರಿಚಯಿಸುವುದು ಅತಿ ಮುಖ್ಯವಾಗಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕಂಗೀಲು, ಕೊಳಲುವಾದನ, ಕಂಸಾಳೆ, ವೀರಗಾಸೆ, ಪೂಜಾ ಕುಣಿತ, ಹಾಲಕ್ಕಿ ಸುಗ್ಗಿ ಕುಣಿತ, ಡೊಳ್ಳು ಕುಣಿತ, ಆಟಿ ಕಳಂಜ, ಬೇಡರ ಕುಣಿತ, ಕರಗ, ಕೋಲಾಟ, ಭರತನಾಟ್ಯ ಸಮೂಹ ನೃತ್ಯ, ತೊಗಲುಗೊಂಬೆಯಾಟ, ಜಾನಪದ ಸಮೂಹ ನೃತ್ಯ, ಪಟ ಕುಣಿತ, ನಂದಿಧ್ವಜ, ಚಿಲಿಪಿಲಿ ಗೊಂಬೆ ಮುಂತಾದ ಕಲಾ ತಂಡಗಳಿಂದ ಸಾಂಸ್ಕೃತಿಕ ಪ್ರದರ್ಶನಗಳು ಮನಸೂರೆಗೊಂಡವು.



ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಹೊನ್ನುರಪ್ಪ, ತಹಸೀಲ್ದಾರ ರಾಘವೇಂದ್ರ, ಪುರಸಭೆ ಮುಖ್ಯಾಧಿಕಾರಿ ವಿಜಯಲಕ್ಷ್ಮಿ ಸೇರಿದಂತೆ ವಿವಿಧ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಕವಿ ಮನಸು

### ಮುಂಜಾವಿನ ಸೊಬಗು



ಎಂತಹ ಚೆಂದ ಬಾನಿನ ಬಣ್ಣ
ನಸುನಸಿಕಿನ ನಸು ಕೆಂಬಣ್ಣ
ಭುವಿಯ ಗರ್ಭದಿಂ ಉಕ್ಕುವ ಬಣ್ಣ
ಎಷ್ಟೊಂದು ಸೊಗಸದು ನೋಡಣ್ಣ

ಹಾಡುತ ಹಕ್ಕಿ ತೆರಯುತ ರೆಕ್ಕೆ
ಜನತೆ ಬಡಿದೆಬ್ಬಿಸಿತು ನೋಡಣ್ಣ
ಕತ್ತಲೆ ಕಳೆಯುತ ಬೆಳಕನು ಚೆಲ್ಲುತ
ರವಿ ಮೇಲೇರುತಿಹನು ನೋಡಣ್ಣ

ಎಷ್ಟೊಂದು ಚೆಂದ ದಿನಕರ ಬಣ್ಣ
ಎಳೆ ಬಿಸಿಲು ಬೆಳಕ ಚೆಲ್ಲುತಿಹನಣ್ಣ
ಭುವಿಯ ಹಣೆಗೆ ತಿಲಕದಂತೆ ಅಣ್ಣ
ಕಂಗೊಳಿಸುತಿಹನು ರವಿ ನೋಡಣ್ಣ

ಬೀಸೋ ಗಾಳಿಗೆ ಬಾಗಿ ಎಲೆಗಳು
ನಾಟ್ಯ ಮಾಡುತಿಹವು ನೋಡಣ್ಣ
ಹಚ್ಚು ಹಸುರಿನ ಬನದಿ ಹರಿಣಗಳು
ಅತ್ಯುತ್ಸಾಹದಿ ಕುಣಿತಹ ನೋಡಣ್ಣ

ಜುಳು ಜುಳು ಹರಿವ ಜರಿಗಳಂಗಳ
ಅಂಗಾರವ ತುಂಬಿದೆ ನೋಡಣ್ಣ
ಕೆರೆ ಒಡಲಲಿ ಒಡೆಯನು ತೆಪ್ಪಲಿ
ಮತ್ಸ್ಯರ ಬೇಟೆಗೆ ಕುಳಿತಿಹನಣ್ಣ

ಬಾನಿನ ಒಡಲಲಿ ಹಕ್ಕಿಯ ಕಲರವ
ನೋಡಲೆರಡು ಕಂಗಳು ಸಾಲದಣ್ಣ
ಸೃಷ್ಟಿ ಸೊಬಗ ವಣಿ9ಸಲಸಾಧ್ಯವು
ಸ್ವರ್ಗವೆ ಧರೆಗಿಳಿದೆತೇನೋ ಅಣ್ಣ

ಶ್ರೀ ಜಗದೀಶ ಬೆನ್ನೂರ
ಹೊಸಪೇಟೆ


## ಮಹಿಳಾ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗೆ ಅರ್ಜಿ ಆಹ್ವಾನ

**ಮೊದಲ ಪುಟದಿಂದ**

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಇವರ ಶಿಫಾರಸ್ಸು ಪತ್ರ ಪಡೆದು ಸೇವಾ ಸಿಂಧು ಪೋರ್ಟಲ್ ನಲ್ಲಿ ಡಿಸೆಂಬರ್ 22 ರೊಳಗೆ ಅರ್ಜಿ ಸಲ್ಲಿಸಬೇಕು.

ಈ ಹಿಂದೆ ಈ ಯೋಜನೆಗಳಡಿ ಸೌಲಭ್ಯ ಪಡೆದ ಫಲಾನುಭವಿಗಳು ಸಲ್ಲಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹೊಸಪೇಟೆ ರಾಜಪೂರ ಪ್ರೈ ಬಿಲ್ಡಿಂಗ್, 3ನೇ ಮಹಡಿ ಕಾಲೇಜ್ ರಸ್ತೆ, ಟ್ರೆಂಡ್ಸ್ ಬಟ್ಟೆ ಅಂಗಡಿ ಎದುರು, ಹೊಸಪೇಟೆ, ಇಲ್ಲಿಗೆ ಅರ್ಜಿ ಸಲ್ಲಿಸುವ ಎಂದು ವಿಜಯನಗರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತುಂಗಭದ್ರಾ ನೀರಿನ ಮಟ್ಟ



**ಸೋಮವಾರ : 27-11-2023**

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1594.66 ಅಡಿ |
| ಒಳ ಹರಿವು | 508 ಕ್ಯುಸೆಕ್ |
| ಹೊರ ಹರಿವು | 8542 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 15.365 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |

**ಕಳೆದ ವರ್ಷ ಇದೇ ದಿನ**

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1629.95 ಅಡಿ |
| ಒಳ ಹರಿವು | 2412 ಕ್ಯುಸೆಕ್ |
| ಹೊರ ಹರಿವು | 7418 ಕ್ಯುಸೆಕ್ |
| ಸಾಮರ್ಥ್ಯ | 93.872 ಟಿಎಂಸಿ |





# ಛಲವಿದ್ದಲ್ಲಿ ಸಾಧನೆಗೆ ಅಂಗವೈಕಲ್ಯತೆ ಅಡ್ಡಿಯಾಗದು

## ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನಿ ಹೇಳಿಕೆ | ಜಿಲ್ಲಾ ಮಟ್ಟದ ವಿಕಲಚೇತನರ ಕ್ರೀಡಾಕೂಟ, ಸಾಂಸ್ಕೃತಿಕ ಕಾರ್ಯಕ್ರಮಕೆ ಚಾಲನೆ





■ ಹಂಪಿ ಟೈಮ್ಸ್ ಬಳ್ಳಾರಿ

ವಿಶೇಷ ಚೇತನರು ಸಂವಿಧಾನಾತ್ಮಕವಾಗಿ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಬಳಸಿಕೊಂಡು ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಅಭಿವೃದ್ಧಿ ಹೊಂದಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಮತ್ತು ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾಸಂಸ್ಥೆಗಳು ಇವರಸಂಯುಕ್ತಾಶ್ರಯದಲ್ಲಿ ವಿಮ್ಸ್ ಕ್ರೀಡಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ವಿಕಲಚೇತನರ ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ವಿಕಲಚೇತನರಾಗಿದ್ದರೂ ಬಹಳಷ್ಟು ಮಂದಿ ಐಎಎಸ್ ಪರೀಕ್ಷೆಯನ್ನೂ ಪಾಸ್ ಮಾಡಿದ್ದಾರೆ. ಪ್ಯಾರಾ ಒಲಂಪಿಕ್ ಕ್ರೀಡಾಕೂಟದಲ್ಲೂ ಉತ್ತಮ ಸಾಧನೆ ತೋರಿದ್ದಾರೆ. ಹಾಗಾಗಿ ಸಾಧನೆ ಮಾಡಬೇಕು ಎಂದು ಛಲ ಹೊಂದಿದ್ದರೆ ಅಂಗವೈಕಲ್ಯತೆ ಸಾಧನೆಗೆ ಅಡ್ಡಿಯಾಗಲಾರದು ಎಂದು ಹೇಳಿದರು.

ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿರುವ ವಿಕಲಚೇತನರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಕಲಚೇತರು ತುಂಬಾ ಉತ್ಸುಕರಾಗಿ ಭಾಗವಹಿಸುತ್ತಿರುವುದನ್ನು ಕಂಡರೆ ಸಂತೋಷವಾಗುತ್ತಿದೆ ಎಂದು ಹರ್ಷ ವ್ಯಕ್ತ ಪಡಿಸಿದರು.

ವಿಮ್ಸ್ ನಿರ್ದೇಶಕ ಡಾ.ಗಂಗಾಧರ ಗೌಡ ಅವರು ಅಧ್ಯಕ್ಷತೆ ವಹಿಸಿದ್ದರು.

ವಿಕಲಚೇತನರಿಗೆ ಶ್ರವಣ ದೋಷವುಳ್ಳವರಿಗೆ 100ಮೀ ಓಟ, ಗುಂಡು ಎಸೆತ, ಜಾವಲಿನ್ ಥ್ರೋ ಸ್ಪರ್ಧೆ, ದೈಹಿಕ ವಿಕಲಚೇತನರಿಗೆ 100 ಮೀ ಓಟ, ಗುಂಡು ಎಸೆತ, ಬುದ್ಧಿಮಾಂದ್ಯರಿಗೆ 100 ಮೀ. ಓಟ, ಮ್ಯೂಜಿಕಲ್ ಚೇರ್ ಸ್ಪರ್ಧೆ ಆಯೋಜಿಸಲಾಗಿತ್ತು. ದೃಷ್ಟಿದೋಷ ಮತ್ತು ದೈಹಿಕ ವಿಕಲಚೇತನರು ಮತ್ತು ಬುದ್ಧಿಮಾಂದ್ಯವಿರುವವರಿಗೆ ಜಾನಪದ ಗೀತೆ, ಭಾವಗೀತೆ, ಭಕ್ತಿಗೀತೆ ಸ್ಪರ್ಧೆಗಳು ನಡೆದವು.

ನಗರದ ವಿಮ್ಸ್ ಕ್ರೀಡಾಂಗಣದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ವಿಕಲಚೇತನರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ನೋಡುಗರಿಗೆ ಗಮನಸೆಳೆದವು.

ಈ ಸಂದರ್ಭದಲ್ಲಿ ವಿಮ್ಸ್ ಅಧೀಕ್ಷಕ ಸೋಮಶೇಖರ್, ಜಿಲ್ಲಾ ಕುಷ್ಟರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗೋವಿಂದಪ್ಪ ಸೇರಿದಂತೆ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಮುಖ್ಯಸ್ಥರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು, ಮತ್ತಿತರು ಉಪಸ್ಥಿತರಿದ್ದರು.

## ಮೈಕ್ರೋ ನ್ಯೂಸ್





ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಸ್ಥಳೀಯ ಸುದ್ದಿಗಳಿಗಾಗಿ ಭೇಟಿ ನೀಡಿ
www.hampitimes.com
epaper.hampitimes.com


### ವಿಶ್ವ ಏಡ್ಸ್ ದಿನಾಚರಣೆ ಮೇಣದ ಬತ್ತಿ ಬೆಳಕು ಜಾಥಾ ನ.30ರಂದು

ಹಂಪಿ ಟೈಮ್ಸ್ ಬಳ್ಳಾರಿ

ವಿಶ್ವ ಏಡ್ಸ್ ದಿನಾಚರಣೆ ಪ್ರಯುಕ್ತ ನ.30ರಂದು ಸಂಜೆ 6 ಗಂಟೆಗೆ ಮೇಣದ ಬತ್ತಿ ಬೆಳಕು ಜಾಥಾವನ್ನು ಜಿಲ್ಲಾ ಆಸ್ಪತ್ರೆಯ ಅವರಣದಿಂದ ರಾಯಲ್ ವೃತ್ತದವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ವಿ.ಇಂದ್ರಾಣಿ ಅವರು ತಿಳಿಸಿದ್ದಾರೆ.

ಡಿ.01ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ವಿಶ್ವ ಏಡ್ಸ್ ದಿನಾಚರಣೆಯ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಇದಕ್ಕೂ ಮುನ್ನ ಬೆಳಿಗ್ಗೆ 9 ಗಂಟೆಗೆ ವಿಶ್ವ ಏಡ್ಸ್ ದಿನಾಚರಣೆಯ ಅಂಗವಾಗಿ ಜಾಗೃತಿ ಜಾಥಾವನ್ನು ಜಿಲ್ಲಾ ಆಸ್ಪತ್ರೆ ಅವರಣದಿಂದ ನಡೆಯಲಿದ್ದು, ಜಿಲ್ಲಾ ಆರೋಗ್ಯ ಕುಟುಂಬ ಮತ್ತು ಕಲ್ಯಾಣಾಧಿಕಾರಿಗಳು ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದ್ದಾರೆ.

### ವೀರ ಮರಣ ಹೊಂದಿದ ಕ್ಯಾಪ್ಟನ್ ಪ್ರಾಂಜಲ್‌ಗೆ ಶ್ರದ್ಧಾಂಜಲಿ



ಹಂಪಿ ಟೈಮ್ಸ್, ಹಗರಿಬೊಮ್ಮನಹಳ್ಳಿ:

ದೇಶಕ್ಕಾಗಿ ಹೋರಾಟಮಾಡಿ ಹುತಾತ್ಮರಾದ ವೀರಯೋಧ ರಾಷ್ಟ್ರೀಯ ರೈಫಲ್ಸ್ ಕ್ಯಾಪ್ಟನ್ ಎಂ.ವಿ.ಪ್ರಂಜಾಲ್‌ರವರಿಗೆ ಇಲ್ಲಿಯ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ತಾಲೂಕು ಘಟಕ ಮತ್ತು ಸಾರ್ವಜನಿಕರಿಂದ ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸಿದರು.

ಪಟ್ಟಣದ ಬಸವೇಶ್ವರ ಬಜಾರದಲ್ಲಿ ಭಾನುವಾರ ರಾತ್ರಿ ಮೇಣದ ಬತ್ತಿ ಬೆಳಗಿಸುವ ಮೂಲಕ, ಶ್ರದ್ಧಾಂಜಲಿ ಅರ್ಪಿಸಿ, ಸಂಘದ ತಾಲೂಕು ಅಧ್ಯಕ್ಷ ಗದ್ದಿಕೆರೆ ಎಂ.ರಾಮರೆಡ್ಡಿ ಮಾತನಾಡಿ, ದೇಶದ ಕಂಟಕವಾಗಿರುವ ಮತ್ತು ದಾಳಿ ನಡೆಸಲೆತ್ನಿಸಿದ ಭಯೋತ್ಪಾದಕರೊಂದಿಗೆ ಹೋರಾಡಿ ವೀರ ಮರಣ ಹೊಂದಿದ ಕ್ಯಾಪ್ಟನ್ ಎಂ.ವಿ.ಪ್ರಾಂಜಲ್‌ರವರು ಈ ದೇಶದ ನಿಜವಾದ ಆಸ್ತಿಯಾಗಿದ್ದರು, ಅವರು ದೇಶಕ್ಕಾಗಿ ಹುಟ್ಟಿ ದೇಶಕ್ಕಾಗಿಯೇ ಮಡಿದವರಾಗಿದ್ದಾರೆ. ಅವರ ನೆನಪಿಗಾಗಿ ರಾಜ್ಯ ಸರ್ಕಾರ ರಸ್ತೆಯೊಂದಕ್ಕೆ ಅಥವಾ ವೃತ್ತಕ್ಕೆ ಹೆಸರಿಡಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಪಾಲ್ಗೊಂಡಿದ್ದ ಗ್ರಾ.ಪಂ.ಯ ನಿವೃತ್ತ ಕಾರ್ಯದರ್ಶಿ ಈ.ಕೃಷ್ಣಮೂರ್ತಿ ಮಾತನಾಡಿ, ದೇಶದಲ್ಲಿ ಭಯೋತ್ಪಾದನೆ ಚಟುವಟಿಕೆಗಳು ನಡೆಯಲು ಬಿಡುವುದಿಲ್ಲ ನಮ್ಮ ವೀರ ಯೋಧರು, ದೇಶದ ಅಭಿಮಾನಕ್ಕಾಗಿ ಸ್ವಾಭಿಮಾನಿಗಳಾಗಿದ್ದು ತಮ್ಮ ಪ್ರಾಣವನ್ನು ಲೆಕ್ಕಿಸದೇ ಹೋರಾಡುತ್ತಾ ದೇಶ ಮತ್ತು ಭಾರತ ಮಾತೆಯ ಮಕ್ಕಳನ್ನು ಕಾಯುತ್ತಾರೆ ಎಂದರು.

ಈ ವೇಳೆ ಶಿವಾನಂದ ಬೇವೂರ್, ಕೊಟ್ರೇಶ್ ಪೋಚಗುಂಡಿ, ಪಿಡಿಒ ಎಂ.ಎಂ.ಬೋಗೇಶ್, ನೂರ್ ಮಹಮದ್, ಎಚ್.ಎಂ.ಬಸವರಾಜ್, ಸುಭಾಸ್ ಬಾಂಗಿ, ಸಿದ್ದಪ್ಪ, ಅಸೀಮ್ ಹುದ್ದೀನ್, ಚನ್ನವೀರಸ್ವಾಮಿ, ಇತರರಿದ್ದರು.

# ಕ್ಷೀರ ಕ್ರಾಂತಿಯಲ್ಲಿ ಡಾ.ವರ್ಗೀಸ್ ಕುರಿಯನ್ ಅವರ ಕೊಡುಗೆ ಅಪಾರ

## ರಾಬಕೋವಿ ಹಾಲು ಒಕ್ಕೂಟ ನಿಗಮದ ನಿರ್ದೇಶಕರಾದ ವೀರಶೇಖರ ರೆಡ್ಡಿ ಹೇಳಿಕೆ

■ ಹಂಪಿ ಟೈಮ್ಸ್ ಬಳ್ಳಾರಿ

ಹಾಲು ಉತ್ಪಾದನೆಯಲ್ಲಿಯೇ ಪ್ರಪಂಚದಲ್ಲಿ ಭಾರತ ದೇಶವು 2ನೇ ಸ್ಥಾನದಲ್ಲಿರಲು ಡಾ.ವರ್ಗೀಸ್ ಕುರಿಯನ್‌ರೇ ಕಾರಣ, ಇವರನ್ನು ಕ್ಷೀರ ಕ್ರಾಂತಿಯ ಪಿತಾಮಹ ಎಂದೇ ಕರೆಯುತ್ತಾರೆ. ಕ್ಷೀರ ಕ್ರಾಂತಿಯಲ್ಲಿ ಇವರು ಸಲ್ಲಿಸಿರುವ ಸೇವೆ ಮತ್ತು ಕೊಡುಗೆ ಅಪಾರವಾಗಿದೆ ಎಂದು ರಾಬಕೋವಿ ಹಾಲು ಒಕ್ಕೂಟ ನಿಗಮದ ನಿರ್ದೇಶಕರಾದ ವೀರಶೇಖರ ರೆಡ್ಡಿ ಅವರು ಹೇಳಿದರು.

ಸೋಮವಾರದಂದು ನಗರದ ಶ್ರೀನಂದ ವಸತಿ ಶಾಲೆಯಲ್ಲಿ ಕ್ಷೀರ ಕ್ರಾಂತಿಯ ಪಿತಾಮಹರಾದ ಪದ್ಮಭೂಷಣ ಡಾ.ವರ್ಗೀಸ್ ಕುರಿಯನ್ ಜನ್ಮ ದಿನೋತ್ಸವ ಅಂಗವಾಗಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಹಾಲು ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಮೂಲ್ ಡೇರಿಯ ಸ್ಥಾಪಕರು ಮತ್ತು ಭಾರತದಲ್ಲಿ ಅಪರೇಷನ್ ಫ್ಲಡ್ (ಕ್ಷೀರ ಕ್ರಾಂತಿ) ಎಂಬ ಜಗತ್ತಿನ ಅತಿ ದೊಡ್ಡ ಡೇರಿ ಯೋಜನೆಯನ್ನು ಪ್ರಾರಂಭಿಸಿ, ವಿಶ್ವದ ಅತಿ ದೊಡ್ಡ ಹಾಲು ಉತ್ಪಾದಕರ ದೇಶವನ್ನಾಗಿ ಮಾಡಲು ಡಾ.ವರ್ಗೀಸ್ ಕುರಿಯನ್ ಅವರೇ ಪ್ರಮುಖರು ಎಂದು ತಿಳಿಸಿದರು.



ಇದೇ ಸಂದರ್ಭದಲ್ಲಿ ಪ್ರತಿಯೊಬ್ಬರ ದೈನಂದಿನ ಜೀವನದಲ್ಲಿ ಹಾಲು ಮತ್ತು ಹಾಲಿನ ಉತ್ಪನ್ನಗಳ ಮಹತ್ವ, ಸಮತೋಲನ ಆಹಾರದಲ್ಲಿರುವ ಪೋಷಕಾಂಶಗಳು ಹಾಗೂ ಆರೋಗ್ಯಕ್ಕೆ ಅವುಗಳ ಮಹತ್ವ ಕುರಿತು ತಿಳಿಸಿದರು.

ಶ್ರೀನಂದ ವಸತಿ ಶಾಲೆಯ ಸಂಸ್ಥಾಪಕ ರಾದ ವಿ.ಗಾಂದಿ ಅವರು ಮಾತನಾಡಿ, ದೈನಂದಿನ ಜೀವನದಲ್ಲಿ ಕಲಬೆರಕೆ ಹಾಲು ಮತ್ತು ಹಾಲಿನ ಉತ್ಪನ್ನಗಳಿಂದ ದೂರವಿರಬೇಕೆಂದರೆ ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಉಪಯೋಗಿಸಿ ಆರೋಗ್ಯವಾಗಿರಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾರುಕಟ್ಟೆ ಗುತ್ತಿಗೆ ಸಮಾಲೋಚಕ ಮಂಜುನಾಥ, ಪಾರ್ವತಿ, ಲಕ್ಷ್ಮೀಕಾಂತ್ ಒಕ್ಕೂಟದ ಸಿಬ್ಬಂದಿಗಳಾದ ಸಹಾಯಕ ವ್ಯವಸ್ಥಾಪಕಿ(ಮಾರುಕಟ್ಟೆ) ಕೆ.ಆರ್. ಇಂದುಕಲಾ, ಸಹಾಯಕ ವ್ಯವಸ್ಥಾಪಕಿ ಜ್ಯೋತಿ, ಕೆಮಿಸ್ಟ್ ಸರೋಜ, ಲೋಹಿತ್ ಕುಮಾರ್, ಸಿ.ಎನ್.ಮಂಜುನಾಥ, ಬಾಬು.ಬಿ ಸೇರಿದಂತೆ ಹಾಗೂ ಶಾಲಾ ಸಿಬ್ಬಂದಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ನಂದಿನಿ ಬಾದಾಮಿ ಹಾಲನ್ನು ವಿತರಿಸಲಾಯಿತು.

# ಅಕ್ಕಿ ಬಹಿರಂಗ ಹರಾಜು ಡಿ.4ರಂದು

■ ಹಂಪಿ ಟೈಮ್ಸ್ ಬಳ್ಳಾರಿ

ಆಹಾರ ಇಲಾಖೆ ಅಧಿಕಾರಿಗಳು ಮತ್ತು ಪೊಲೀಸ್ ಸಿಬ್ಬಂದಿಗಳೊಂದಿಗೆ ಜಂಟಿಯಾಗಿ ಕಾರ್ಯಾಚರಣೆ ನಡೆಸಿ ಜಪ್ತಿ ಮಾಡಲಾದ 3862.95 ಕ್ವಿಂಟಾಲ್ ಅಕ್ಕಿಯನ್ನು ಡಿ.4ರಂದು ಬೆಳಿಗ್ಗೆ 11.30ಕ್ಕೆ ನಗರದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಸಗಟು ಗೋದಾಮು ಇಲ್ಲಿ ಬಹಿರಂಗ ಹರಾಜು ಮಾಡಲಾಗುತ್ತದೆ. ಆಸಕ್ತಿಯುಳ್ಳ ಬಿಡ್ಡುದಾರರು ಷರತ್ತುಗಳೊಂದಿಗೆ ಪಾಲ್ಗೊಳ್ಳಬಹುದು ಎಂದು ತಹಶೀಲ್ದಾರರಾದ ಗುರುರಾಜ ಅವರು ತಿಳಿಸಿದ್ದಾರೆ.

**ಷರತ್ತುಗಳು:**

ಪ್ರತಿಯೊಬ್ಬ ಬಿಡ್ಡುದಾರರು ರೂ.130000/– ಮುಂಗಡ ಭದ್ರತಾ ಠೇವಣಿ ಮೊತ್ತವನ್ನು ತಹಶೀಲ್ದಾರರು ಬಳ್ಳಾರಿ ಇವರ ಹೆಸರಲ್ಲಿ ಡಿಡಿ ಪಾವತಿಸಿ, ಹರಾಜಿನಲ್ಲಿ ಭಾಗವಹಿಸಬೇಕು. ಈ ಹರಾಜಿನಲ್ಲಿ ಸರ್ಕಾರ ಖರೀದಿ ಮಾಡುವ ಓ.ಎಂ.ಎಸ್.ಎಸ್.(ಡಿ) ದರ ಅಕ್ಕಿ ಕ್ವಿಂಟಾಲ್ ಒಂದಕ್ಕೆ ರೂ,2300.00/–ನ್ನು ನಿಗಧಿಪಡಿಸಲಾಗಿದೆ. ಈ ಮೊತ್ತಕ್ಕಿಂತ ಕಡಿಮೆ ಮೊತ್ತ ಕೂಗಿದಲ್ಲಿ ಹಾಗೂ ಹರಾಜು ಸಮಯದಲ್ಲಿ ಬಿಡ್ಡುದಾರರ ಸಂಖ್ಯೆ ಕಡಿಮೆ ಇದ್ದಲ್ಲಿ ಹರಾಜು ಮಾಡುವ ಅಥವಾ ಹರಾಜು ಮಾಡುವ ಪ್ರಕ್ರಿಯೆಯನ್ನು ಮುಂದೂಡುವ ಅಧಿಕಾರವನ್ನು ತಹಶೀಲ್ದಾರರಿಗೆ ಇರುತ್ತದೆ.

ಸವಾಲುದಾರರು ಹರಾಜಿನಲ್ಲಿ ಗೊತ್ತುಪಡಿಸಿದ ದಿನಾಂಕದಂದು ಅರ್ಧಗಂಟೆ ಮುಂಚಿತವಾಗಿ ಭಾಗವಹಿಸಬೇಕು. ಅಗತ್ಯ ವಸ್ತುಗಳು ಸಗಟು/ಚಿಲ್ಲರೆ ವ್ಯಾಪಾರಸ್ಥರು ಮತ್ತು ಕಮಿಷನ್ ಏಜೆಂಟರು ಹಾಗೂ ಅಕ್ಕಿ ಗಿರಣಿ ಮಾಲಿಕರು ಹಾಗೂ ದೊಡ್ಡ ಪ್ರಮಾಣದ ಬಳಿಕೆದಾರರ ಸಂಸ್ಥೆಗಳು ಹರಾಜಿನಲ್ಲಿ ಭಾಗವಹಿಸಬಹುದು.

ಪಧಾರ್ಥಗಳನ್ನು ಎಲ್ಲಿದಿಯೋ ಅಲ್ಲೆ ಹಾಗೂ ಹೇಗಿವೆಯೋ ಹಾಗೇ ಷರತ್ತಿನಡಿ ಹರಾಜು ಮಾಡಲಾಗುತ್ತಿರುವದರಿಂದ ಹರಾಜಿನಲ್ಲಿ ಭಾಗವಹಿಸುವವರು ಅದಕ್ಕೂ ಮುನ್ನ ಡಿ.04ರಂದು 10.30 ಗಂಟೆಗೆ ಕೆಎಫ್‌ಸಿಎಸ್‌ಸಿ ಸಗಟು ಕೇಂದ್ರಕ್ಕೆ ಭೇಟಿ ನೀಡಿ ಅಕ್ಕಿಯ ಪರಿಶೀಲನೆ ಮಾಡಿಕೊಳ್ಳಬಹುದು. ಹರಾಜಿನಲ್ಲಿ ಭಾಗವಹಿಸುವವರು ತಮ್ಮ ವ್ಯಾಪಾರ ನೊಂದಣಿಪತ್ರ/ಸಂಸ್ಥೆಯ ನೋಂದಾವಣೆ ಪತ್ರ ಮತ್ತು ಆಧಾರ/ಜಿಎಸ್‌ಟಿ ದಾಖಲೆಗಳನ್ನು ನೋಂದಾವಣೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು ಹಾಗೂ ಇಲಾಖೆಯ ಕಾನೂನಿಗೆ ಒಳಪಟ್ಟಿರಬೇಕು.

ಬಿಡ್‌ನಲ್ಲಿ ನಮೂದು ಆಗುವ ದರಗಳನ್ನು ಜಿಲ್ಲಾಧಿಕಾರಿಗಳ ಬಳ್ಳಾರಿ ಇವರು ಅನುಮೋದಿಸಿದ ನಂತರ ಬಿಡ್ ಒಟ್ಟು ಮೌಲ್ಯವನ್ನು ಸರ್ಕಾರದ ಲೆಕ್ಕ ಶಿರ್ಷಿಕೆಗೆ ನಿಗಧಿತ ಅವಧಿ ಒಳಗಾಗಿ ಜಮಾ ಮಾಡಿ ಚಲಾನನ್ನು ಹಾಜರು ಪಡಿಸಿದ ನಂತರ ಹರಾಜಾದ ಅಕ್ಕಿಯನ್ನು ಎತ್ತುವಳಿಗೆ ಅವಕಾಶ ನೀಡಲಾಗುವುದು. ಅಂತಿಮ ಹರಾಜನ್ನು ಒಪ್ಪಿಕೊಳ್ಳುವುದು ಅಥವಾ ತಿರಸ್ಕರಿಸುವ ಹಕ್ಕನ್ನು ತಹಶೀಲ್ದಾರರು ಹೊಂದಿರುತ್ತಾರೆ. ಬಹಿರಂಗ ಹರಾಜು ಆದ ಅಕ್ಕಿಯನ್ನು ತಮ್ಮ ಸ್ವಂತ ಖರ್ಚಿನಲ್ಲಿ ಆದೇಶ ನೀಡಿದ ಮೂರು ದಿನಗಳಲ್ಲಿ ಏಈಅಖಅ ಬಳ್ಳಾರಿ ಇವರರಿಂದ ಎತ್ತುವಳಿ ಮಾಡಬೇಕು.

**ವಿಶೇಷ ಸೂಚನೆ**

ಅಗತ್ಯ ವಸ್ತುಗಳ ಕಾಯ್ದೆ 1955ರ ಕಲಂ 3, 6(ಎ) ಮತ್ತು 7 ರಡಿಯಲ್ಲಿ ಯಾವುದೇ ಬಿಡ್ಡುದಾರರ ಹೆಸರಿನಲ್ಲಿ ಪೊಲೀಸ್ ಪ್ರಕರಣ ದಾಖಲಾಗಿರಬಾರದು. ಒಂದು ವೇಳೆ ಪೊಲೀಸ್ ಪ್ರಕರಣ ದಾಖಲಾಗಿದ್ದಲ್ಲಿ ಅಂತಹ ಬಿಡ್ಡುದಾರರು (ವ್ಯಕ್ತಿ)/ಸಂಸ್ಥೆ ಹಾಗೂ ಸಾರ್ವಜನಿಕ ವಿತರಣ ವ್ಯವಸ್ಥೆ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವವರು ಹರಾಜಿನಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಒಂದು ವೇಳೆ ಅಂತಹ ವ್ಯಕ್ತಿಗಳು/ಟ್ರೇಡ್‌ಗಳ ಭಾಗವಹಿಸಿದ್ದು ಕಂಡು ಬಂದಲ್ಲಿ ಅಂತವರ ಇಎಂಡಿ ಮೊತ್ತವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಕಚೇರಿಯ ಆಹಾರ ಶಾಖೆಗೆ ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮಕ್ಕೆ ಹೆಸರು ನೋಂದಾಯಿಸಿ

■ ಹಂಪಿ ಟೈಮ್ಸ್ ಬಳ್ಳಾರಿ

ಪ್ರಸ್ತಕ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವದಕಾರ್ಯಕ್ರಮವನ್ನು ಡಿ.01ರಂದು ಬೆಳಿಗ್ಗೆ 10.30ಕ್ಕೆ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಬಿಡಿಎಎ ಫುಟ್ಬಾಲ್ ಮೈದಾನ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಆಸಕ್ತ ಯುವಕ, ಯುವತಿಯರು ನೊಂದಾಯಿಸಿ ಕೊಳ್ಳಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಕೆ.ಗ್ರೇಸಿ ಅವರು ತಿಳಿಸಿದ್ದಾರೆ.

ಆಸಕ್ತ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಯುವಕ, ಯುವತಿ ಸಂಘಗಳು, 15 ರಿಂದ 29 ವರ್ಷದ ವಯೋಮಿತಿಯ ಯುವಕ, ಯುವತಿಯರು, ಶಾಲಾ ಕಾಲೇಜಿನ ಕಲಾವಿದರು ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದು.

ನೋಂದಣಿಗೆ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಮತ್ತು ಜನನ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ.

ಈ ಕಾರ್ಯಕ್ರಮದಲ್ಲಿ ಯುವಕ ಯುವತಿಯರಿಗಾಗಿ ಜಾನಪದ ನೃತ್ಯ (ತಂಡ), ಜಾನಪದ ನೃತ್ಯ(ವೈಯಕ್ತಿಕ), ಜಾನಪದ ಗೀತೆ (ತಂಡ), ಜಾನಪದ ಗೀತೆ (ವೈಯಕ್ತಿಕ), ಕಥೆ ಬರೆಯುವುದು (ವೈಯಕ್ತಿಕ) ಸ್ಟೋ ರಿ ರೈಟಿಂಗ್(1000 ಪದಗಳಿಗೆ ಮೀರದಂತೆ), ಪೋಸ್ಟರ ಮೇಕಿಂಗ್ (ವೈಯಕ್ತಿಕ) (ಬಿತ್ತಿ ಪತ್ರ ತಯಾರಿಕೆ) ಪೋಸ್ಟರ್ ಎ3 ಸೈಜ್ 11.7*16.5, Declamation (ಘೋಷಣೆ) ಕನ್ನಡ, ಆಂಗ್ಲ ಹಾಗೂ ಹಿಂದಿ ಒಳಗೊಂಡಿರಬೇಕು. ಛಾಯಾ ಚಿತ್ರಣ (ವೈಯಕ್ತಿಕ) ಛಾಯಾಚಿತ್ರ ಸ್ಪರ್ಧೆಗಳನ್ನು ಏರ್ಪಡಿಸ ಲಾಗುವುದು.

**ಸ್ಪರ್ಧಾತ್ಮಕವಲ್ಲದ ವಿಭಾಗ:**

ಯುವಜನೋತ್ಸವ ಕಾರ್ಯಕ್ರಮದಲ್ಲಿ ಸ್ಪರ್ಧಾತ್ಮಕವಲ್ಲದ ವಿಭಾಗಕ್ಕೆ ಸಂಬಂಧಿಸಿದಂತೆ ಸ್ಪರ್ಧೆಗಳನ್ನು ಜಿಲ್ಲಾ ಮಟ್ಟದಲ್ಲಿ ಆಯೋಜನೆ ಮಾಡುವುದು ಮತ್ತು ಆಯ್ಕೆ ಮಾಡಿ ರಾಜ್ಯ ಮಟ್ಟಕ್ಕೆ ಕಳುಹಿಸುವುದು.

ರಾಜ್ಯ ಮಟ್ಟದಲ್ಲಿ ವಿಜೇತ ವಿಭಾಗದವರು ಕೆಳಕಾಣಿಸಿಸದ ಥೀಮ್‌ಗಳನ್ನು Draw of Lots ಮೂಲಕ ರಾಷ್ಟ್ರ ಮಟ್ಟದಲ್ಲಿ ಆಯ್ಕೆಮಾಲಾಗುತ್ತದೆ. ಸ್ಪರ್ಧಾತ್ಮಕವಲ್ಲದ ವಿಭಾಗಕ್ಕೆ ಮಾರ್ಗಸೂಚಿಯನ್ನು ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಿದ ಕೂಡಲೇ ಒದಗಿಸಲಾಗುವುದು.

ಉದ್ಯಮಶೀಲತೆಯಾದರೂ ಯುವಕ ರನ್ನು ಸಬಲೀಕರಣ ಗೊಳಿಸುವುದು. ಡಿಜಿಟಲ್ ಇಂಡಿಯಾ, ಸಮಾಜಕ್ಕೆ ವಿಜ್ಞಾನ ಮತ್ತು ತಂತ್ರಜ್ಞಾನ, ಆರೋಗ್ಯ ಮತ್ತು ಫಿಟ್ನೆಸ್. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಹಾಗೂ ಮೊ.9972552385, 7026401500, 9036335986ಗೆ ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.


ಇ–ಪೇಪರ್ ಉಚಿತ
ಇಂದೇ ಹಂಪಿ ಟೈಮ್ಸ್ ವಾಟ್ಸ್‌ಪ್ ಚಾನಲ್‌ಗೆ ಸೇರಿ, ಇ–ಪೇಪರ್ ಉಚಿತವಾಗಿ ಪಡೆಯಿರಿ




ಬೇಕಾಗಿದ್ದಾರೆ
ರಾಯಚೂರು ಮತ್ತು ಹೊಸಪೇಟೆ ಸುತ್ತಮುತ್ತ ಕೆಲಸ ಮಾಡಲು ಸದೃಢ ಯುವಕರು ಸೆಕ್ಯೂರಿಟಿ ಗಾರ್ಡ್ ಮತ್ತು ಸೂಪರ್‌ವೈಜರ್ ಹುದ್ದೆಗೆ ಬೇಕಾಗಿದ್ದಾರೆ
(ಅನುಭವ ಇದ್ದವರಿಗೆ ಆದ್ಯತೆ)
ವಿದ್ಯಾರ್ಹತೆ: SSLC/PUC
ವಯೋಮಿತಿ: 18 ರಿಂದ 45 ವರ್ಷ. ಆಸಕ್ತರು ಸಂಪರ್ಕಿಸಿರಿ
9741194787
9591183772

AFFIDAVIT
I, **Kumar Goud Ravishankar** (Old Name) S/o **Rajashekar Gowda K**, Residing at H.No.1016, Minugu, 11th ward, Near Muncipal High School, Annapurna Badavane Hospet-583201, Dist Vijayanagar, Karnataka State have changed my name to **KUMAR RAVISHANKAR** (New Name) vide affidavit dated 25-11-2023 before notary T.Hanumantha at Hosapete-583201





Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA